# 2005ರ ಕರ್ನಾಟಕ ಅಧಿನಿಯಮ ಸಂಖ್ಯೆ 4

## ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ಅಧಿನಿಯಮ 2005

**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 14 ನೇ ಪ್ರಕರಣದ ತಿದ್ದುಪಡಿ
3. ನಿರಸನ ಮತ್ತು ಉಳಿಸುವಿಕೆಗಳು


**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

ರಾಜ್ಯದಲ್ಲಿರುವ ನಾಲ್ಕು ಎಸ್ಕಾಂಗಳಲ್ಲಿ ಒಂದಾದ ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿಯು ಇಂಥ ಒಂದು ಕಂಪನಿಯಾಗಿದ್ದು, ಇದು ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ವಿದ್ಯುತ್ ಸರಬರಾಜಿನ ವಿತರಣೆಯ ಹೊಣೆಗಾರಿಕೆಯನ್ನು ಹೊಂದಿದೆ. ವಿಶಾಲ ಪ್ರದೇಶದಲ್ಲಿ ಚದುರಿ ಹೋಗಿರುವ ತನ್ನ ಗ್ರಾಹಕರಿಗೆ ಸಾಕಷ್ಟು ಸೇವೆಯನ್ನು ಒದಗಿಸುವುದು ಅದಕ್ಕೆ ಕಷ್ಟಕರವಾಗಿದೆ. ಆದ ಕಾರಣ, ರಾಜ್ಯ ಸರ್ಕಾರವು ಮೈಸೂರಿನಲ್ಲಿ ಕೇಂದ್ರ ಸ್ಥಾನವನ್ನು ಹೊಂದಿರುವ, ಮೈಸೂರು, ಚಾಮರಾಜನಗರ, ಮಂಡ್ಯ ಮತ್ತು ಹಾಸನ ಜಿಲ್ಲೆಗಳನ್ನು ಒಳಗೊಂಡ ಕಾರ್ಯಕ್ಷೇತ್ರದ ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ಎಂಬ ಹೆಸರಿನ ಹೊಸದಾದ ವಿದ್ಯುಚ್ಛಕ್ತಿ ಸರಬರಾಜು ಕಂಪೆನಿಯನ್ನು ಸ್ಥಾಪಿಸಲು ನಿರ್ಧರಿಸಿತು, ಸರ್ಕಾರಿ ಆದೇಶ ಸಂಖ್ಯೆ: ಇಎನ್ 98 ಪಿಎಸ್‌ಆರ್ 2004 ದಿನಾಂಕ: 19.8.2004 ನೋಡಿ. ಇತರ ಎಸ್ಕಾಂಗಳಂತೆ ಮತ್ತು ಅವುಗಳಷ್ಟೇ ಸರಿಸಮನಾಗಿ ಹೊಸ ಕಂಪೆನಿಯು ಕಾರ್ಯನಿರ್ವಹಿಸುವಂತಾಗಬೇಕಾದರೆ, ಆ ಕಂಪೆನಿಗಳಿಗೆ ಇರುವಂಥ ಸ್ವಾಯತ್ತತೆಯನ್ನೇ ಇದೂ ಹೊಂದಿರಬೇಕು. ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ಅಧಿನಿಯಮ, 1999ಕ್ಕೆ ಸೂಕ್ತ ತಿದ್ದುಪಡಿಮಾಡಿ ಮೈಸೂರು, ಚಾಮರಾಜನಗರ, ಮಂಡ್ಯ ಮತ್ತು ಹಾಸನ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಅದರ ಎಲ್ಲ ಸ್ವತ್ತುಗಳು ಮತ್ತು ಹೊಣೆಗಾರಿಕೆಗಳನ್ನು ಮೆಸ್ಕಾಂನಿಂದ ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ಕಂಪನಿಗೆ ವರ್ಗಾಯಿಸುವುದು ಅಗತ್ಯವಾಗಿದೆ.

ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯು ತಕ್ಷಣ ಕಾರ್ಯನಿರ್ವಹಣೆಯನ್ನು ಪ್ರಾರಂಭಿಸಲು ಸಾಧ್ಯವಾಗುವಂತೆ ಮಾಡುವುದಕ್ಕಾಗಿ, ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ಅಧಿನಿಯಮ 1999ರ 14ನೇ ಪ್ರಕರಣಕ್ಕೆ ತಿದ್ದುಪಡಿಮಾಡಿ 24.12.2004 ರಂದು ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ಅಧ್ಯಾದೇಶ 2004ನ್ನು ಪ್ರಖ್ಯಾಪಿಸಲಾಯಿತು. ಸದರಿ ಅಧ್ಯಾದೇಶದ ಬದಲಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2005ರ ವಿಧಾನಪರಿಷತ್ತಿನ ವಿಧೇಯಕ ಸಂಖ್ಯೆ 1)

(ಭಾರತ ಸಂವಿಧಾನದ ಏಳನೇ ಅನುಸೂಚಿಯ 3ನೇ ಪಟ್ಟಿಯ ನಮೂದು 38)

# 2005ರ ಕರ್ನಾಟಕ ಅಧಿನಿಯಮ ಸಂಖ್ಯೆ 4

(2005 ರ ಮಾರ್ಚ್ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ಅಧಿನಿಯಮ 2005

(2005 ರ ಮಾರ್ಚ್ ಐದನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ಅಧಿನಿಯಮ, 1999 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ಅಧಿನಿಯಮ, 1999 ನ್ನು (1999 ರ ಕರ್ನಾಟಕ ಅಧಿನಿಯಮ 25) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ :-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ** :- (1) ಈ ಅಧಿನಿಯಮವನ್ನು ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2) ಇದು 2004 ರ ಡಿಸೆಂಬರ್ ಇಪ್ಪತ್ತ ನಾಲ್ಕನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 14 ನೇ ಪ್ರಕರಣದ ತಿದ್ದುಪಡಿ** :- ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ ಅಧಿನಿಯಮ, 1999 ರ (1999 ರ ಕರ್ನಾಟಕ ಅಧಿನಿಯಮ 25) 14 ನೇ ಪ್ರಕರಣದಲ್ಲಿ ,-

(1) (5) ನೇ ಉಪ ಪ್ರಕರಣದಲ್ಲಿ "ಕೆಪಿಟಿಸಿ ಯೊಡನೆ" ಮತ್ತು ಕೆಪಿಟಿಸಿ ಯಲ್ಲಿ" ಎಂಬ ಪದಗಳ ತರುವಾಯ ಅನುಕ್ರಮವಾಗಿ "ಅಥವಾ ಸಂದರ್ಭಾನುಸಾರ ಲೈಸನ್ಸುದಾರನೊಡನೆ" ಮತ್ತು "ಅಥವಾ ಸಂದರ್ಭಾನುಸಾರ ಲೈಸನ್ಏದಾರನಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು; ಮತ್ತು

(2) (8) ನೇ ಉಪ ಪ್ರಕರಣದಲ್ಲಿ "ಕೆಪಿಟಿಸಿಯು" ಎಂಬ ಅಕ್ಷರಗಳ ತರುವಾಯ "ಅಥವಾ ಸಂದರ್ಭಾನುಸಾರ ಲೈಸನ್ಸುದಾರನು" ಎಂಬ ಪದಗಳನ್ನು ಸೇರಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು** :- ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ಅಧ್ಯಾದೇಶ, 2004 ನ್ನು (2004 ರ ಕರ್ನಾಟಕ ಅಧ್ಯಾದೇಶ 5) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸಿತಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ. ದಕ್ಷಿಣಾಮೂರ್ತಿ**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

---

ಕರ್ನಾಟಕ ರಾಜ್ಯ ಪತ್ರದ ಭಾಗ-ಕIಗಿA ವಿಶೇಷ ಪತ್ರಿಕೆ ಸಂಖ್ಯೆ: 311 ದಿನಾಂಕ: 7.3.2005 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 1 ಶಾಸನ 2005